**National**
**Kannada**
**23.05.2026 7.35 pm**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ’ವಿಬಿ-ಜಿ ರಾಮ್ ಜಿ ಕಾಯ್ದೆ-೨೦೨೫’ ಕುರಿತು ಸಾರ್ವಜನಿಕ ಸಮಾಲೋಚನೆಗೆ ಕೇಂದ್ರ ಸರ್ಕಾರದಿಂದ ಕರಡು ನಿಯಮಗಳ ಪ್ರಕಟ

೨. ಜಾಗತಿಕ ಒಳಿತಿಗೆ ಭಾರತ - ಅಮೆರಿಕ ನಡುವೆ ನಿಕಟ ಕಾರ್ಯ ಮುಂದುವರಿಕೆ - ಪ್ರಧಾನಿ ನರೇಂದ್ರ ಮೋದಿ

೩. ೨೦೪೭ ರ ವೇಳೆಗೆ ವಿಕಸಿತ ಭಾರತ ದೃಷ್ಟಿಕೋನ ಸಾಕಾರಕ್ಕೆ ಸರ್ಕಾರ ಬದ್ಧ - ಕೇಂದ್ರ ಸಚಿವ ಡಾ.ಎಲ್.ಮುರುಗನ್

೪. ಐಪಿಎಲ್ ಟಿ-೨೦ ಕ್ರಿಕೆಟ್; ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ಫೀಲ್ಡಿಂಗ್ ಆಯ್ಕೆ

**<>><><*><><<>**

ವಿಬಿ-ಜಿ ರಾಮ್ ಜಿ ಕಾಯ್ದೆ-೨೦೨೫ ಕುರಿತಂತೆ ವ್ಯಾಪಕ ಸಾರ್ವಜನಿಕ ಸಮಾಲೋಚನೆಗಾಗಿ ಕೇಂದ್ರ ಸರ್ಕಾರ ಕರಡು ನಿಯಮಗಳನ್ನು ಪ್ರಕಟಿಸಿದೆ. ಕರಡು ನಿಯಮಗಳ ಕುರಿತು ಆಕ್ಷೇಪಣೆಗಳು ಅಥವಾ ಸಲಹೆಗಳನ್ನು ಯಾವುದೇ ವ್ಯಕ್ತಿ ಅಥವಾ ಭಾಗಿದಾರರು ಇಲ್ಲವೆ ಸಂಸ್ಥೆಗಳು ಮುಂದಿನ ತಿಂಗಳ ೨೧ ರೊಳಗೆ ಸಲ್ಲಿಸಬಹುದಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವಾಲಯ ತಿಳಿಸಿದೆ. ೨೦ ವರ್ಷ ಹಳೆಯದಾದ ’ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ- ಮನ್ರೇಗಾ’ ೨೦೦೫ ರ ಬದಲಿಗೆ ವಿಕಸಿತ ಭಾರತ- ಜಿ ರಾಮ್ ಜಿ ಕಾಯ್ದೆಯನ್ನು ಜಾರಿಗೆ ತರಲಾಗಿದೆ. ಹೊಸ ಕಾಯ್ದೆಯು, ಹಣಕಾಸು ವರ್ಷದಲ್ಲಿ ಶಾಸನಬದ್ಧ ಉದ್ಯೋಗ ಖಾತರಿಯನ್ನು ೧೦೦ ದಿನಗಳಿಂದ ೧೨೫ ದಿನಗಳಿಗೆ ಹೆಚ್ಚಿಸುವ ಗುರಿ ಹೊಂದಿದೆ. ಕರಡು ನಿಯಮಗಳನ್ನು ಸೆಕ್ಷನ್ ೩೩ ಮತ್ತು ಕಾಯ್ದೆಯ ಇತರ ಸಂಬಂಧಿತ ನಿಬಂಧನೆಗಳಿಗೆ ಅನುಗುಣವಾಗಿ ರೂಪಿಸಲಾಗಿದೆ. ಪರಿವರ್ತನಾ ನಿಬಂಧನೆಗಳ ನಿಯಮಗಳು, ರಾಷ್ಟ್ರೀಯ ಮಟ್ಟದ ಸ್ಟೀರಿಂಗ್ ಸಮಿತಿ ನಿಯಮಗಳು, ಕೇಂದ್ರ ಗ್ರಾಮೀಣ ರೋಜ್‌ಗಾರ್ ಗ್ಯಾರಂಟಿ ಕೌನ್ಸಿಲ್ ನಿಯಮಗಳು, ಆಡಳಿತಾತ್ಮಕ ವೆಚ್ಚ

ನಿಯಮಗಳು, ಕುಂದುಕೊರತೆ ಪರಿಹಾರ ನಿಯಮಗಳು ಸೇರಿದಂತೆ ಕರಡು ನಿಯಮಗಳನ್ನು ಸಮಾಲೋಚನೆಗಾಗಿ ಸಾರ್ವಜನಿಕ ವಲಯದಲ್ಲಿ ಇರಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಬರುವ ಜುಲೈ ೧ ರಿಂದ ಅನುಷ್ಠಾನಗೊಳ್ಳಲು ವಿಬಿ-ಜಿ ರಾಮ್ ಜಿ ಕಾಯ್ದೆ -೨೦೨೫ ಕ್ಕೆ ಈ ತಿಂಗಳ ೧೧ ರಂದು ಅಧಿಸೂಚನೆ ಹೊರಡಿಸಲಾಗಿದೆ.

<>><><*><><<>

ಭಾರತ-ಅಮೆರಿಕ ಸಮಗ್ರ ಜಾಗತಿಕ ಕಾರ್ಯತಂತ್ರದ ಸಹಭಾಗಿತ್ವದಲ್ಲಿ ನಿರಂತರ ಪ್ರಗತಿ ಹಾಗೂ ಪ್ರಾದೇಶಿಕ ಮತ್ತು ಜಾಗತಿಕ ಶಾಂತಿ ಮತ್ತು ಭದ್ರತೆಗೆ ಸಂಬಂಧಿಸಿದ ವಿಷಯಗಳ ಕುರಿತು ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ದೆಹಲಿಯಲ್ಲಿಂದು ಚರ್ಚಿಸಿದರು. ವಿದೇಶಾಂಗ ಸಚಿವ ಡಾ.ಜೈಶಂಕರ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಜಾಗತಿಕ ಒಳಿತಿಗಾಗಿ ಭಾರತ ಮತ್ತು ಅಮೆರಿಕ ನಿಕಟವಾಗಿ ಕಾರ್ಯವನ್ನು ಮುಂದುವರಿಸಲಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಮಾಧ್ಯಮ ಪೋಸ್ಟ್ ಮಾಡಿದ್ದಾರೆ. ರಕ್ಷಣಾ, ಕಾರ್ಯತಂತ್ರದ ತಂತ್ರಜ್ಞಾನಗಳು, ವ್ಯಾಪಾರ ಮತ್ತು ಹೂಡಿಕೆ, ಇಂಧನ ಭದ್ರತೆ, ಸಂಪರ್ಕ, ಶಿಕ್ಷಣ ಸೇರಿದಂತೆ ವ್ಯಾಪಕ ಶ್ರೇಣಿಯ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರದಲ್ಲಿನ ನಿರಂತರ ಪ್ರಗತಿಯ ಕುರಿತು ರೂಬಿಯೊ, ಪ್ರಧಾನಿ ಅವರಿಗೆ ವಿವರಿಸಿದ್ದಾರೆ ಎಂದು ಪ್ರಧಾನಮಂತ್ರಿ ಕಚೇರಿಯ ಪ್ರಕಟಣೆ ತಿಳಿಸಿದೆ. ಪಶ್ಚಿಮ ಏಷ್ಯಾದ ಪರಿಸ್ಥಿತಿ ಸೇರಿದಂತೆ ವಿವಿಧ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ರೂಬಿಯೊ ಅವರು ಅಮೆರಿಕದ ದೃಷ್ಟಿಕೋನವನ್ನು ಮಾತುಕತೆಯ ವೇಳೆ ಪ್ರಸ್ತಾಪಿಸಿದ್ದಾರೆ. ಶಾಂತಿ ಪ್ರಯತ್ನಗಳಿಗೆ ಭಾರತದ ಸ್ಥಿರ ಬೆಂಬಲವನ್ನು ಪ್ರಧಾನಿ ಅವರು ಇದೇ ವೇಳೆ ಪುನರುಚ್ಚರಿಸಿದ್ದಾರೆ. ಅಲ್ಲದೆ, ಮಾತುಕತೆ ಮತ್ತು ರಾಜತಾಂತ್ರಿಕತೆಯ ಮೂಲಕ ಸಂಘರ್ಷಗಳ ಶಾಂತಿಯುತ ಪರಿಹಾರಕ್ಕೆ ಕರೆ ನೀಡಿದ್ದಾರೆ. ಇದೇ ೨೬ ರಂದು ನಡೆಯಲಿರುವ ಕ್ವಾಡ್ ವಿದೇಶಾಂಗ ಸಚಿವರ ಸಭೆಯಲ್ಲಿ ಭಾಗವಹಿಸಲು ಕಾರ್ಯದರ್ಶಿ ರುಬಿಯೊ ಭಾರತಕ್ಕೆ ನಾಲ್ಕು ದಿನಗಳ ಭೇಟಿಯಲ್ಲಿದ್ದಾರೆ. ರುಬಿಯೊ ಅವರು ನಾಳೆ ವಿದೇಶಾಂಗ ಸಚಿವ ಡಾ.ಎಸ್ ಜೈಶಂಕರ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಈ ಭೇಟಿ ಭಾರತ-ಅಮೆರಿಕ ನಡುವಿನ ಸಮಗ್ರ ಜಾಗತಿಕ ಕಾರ್ಯತಂತ್ರ ಸಹಭಾಗಿತ್ವಕ್ಕೆ ಮತ್ತಷ್ಟು ಬಲ ನೀಡುವ ನಿರೀಕ್ಷೆಯಿದೆ.

<>><><*><><<>

ಸರ್ಕಾರಿ ಉದ್ಯೋಗಗಳು ಕೇವಲ ಜೀವನೋಪಾಯವಾಗಿರದೆ, ನಾಗರಿಕರ ಜೀವನವನ್ನು ಸುಧಾರಿಸಲು ಮತ್ತು ಸರಳಗೊಳಿಸಲು ಇರುವ ಪ್ರಮುಖ ಮಾಧ್ಯಮ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ವಿಡಿಯೋ ಕಾನ್ಫರೆನ್ಸ್ ಮೂಲಕ ದೇಶಾದ್ಯಂತ ನಡೆದ ೧೯ನೇ 'ಉದ್ಯೋಗ ಮೇಳ' ಉದ್ದೇಶಿಸಿ ಮಾತನಾಡಿದ ಅವರು, ಭಾರತದ ಪ್ರಗತಿಪಥದ ಭಾಗವಾಗಲು ಇಂದು ಇಡೀ ಜಗತ್ತೇ ಅತ್ಯಂತ ಉತ್ಸುಕವಾಗಿದೆ. ದೇಶದ ಯುವಜನತೆಗೆ ಜಾಗತಿಕ ಮಟ್ಟದಲ್ಲಿ ಉದ್ಯೋಗಾವಕಾಶಗಳು ಮತ್ತು ಹೊಸ ಅನುಭವಗಳನ್ನು ಒದಗಿಸುವ ಉದ್ದೇಶದಿಂದ ಭಾರತ ವಿವಿಧ ರಾಷ್ಟ್ರಗಳೊಂದಿಗೆ ಮಹತ್ವದ ಪಾಲುದಾರಿಕೆ ಹೊಂದುತ್ತಿದೆ. ಪ್ರಸ್ತುತ ಜಾಗತಿಕ ಮಾರುಕಟ್ಟೆಯಲ್ಲಿ ಭಾರತ ಅತ್ಯಂತ ವಿಶ್ವಾಸಾರ್ಹ ಪೂರೈಕೆ ಸರಪಳಿಯಾಗಿ ಹೊರಹೊಮ್ಮುತ್ತಿದೆ ಎಂದರು. ೨೦೪೭ರ ವೇಳೆಗೆ ದೇಶವನ್ನು ವಿಕಸಿತ ಭಾರತವನ್ನಾಗಿಸುವ ದೃಢ ಸಂಕಲ್ಪದೊಂದಿಗೆ ಪ್ರತಿಯೊಬ್ಬ ಭಾರತೀಯನೂ ಶ್ರಮಿಸುತ್ತಿದ್ದು, ಈ ಗುರಿ ತಲುಪಲು ರಕ್ಷಣೆ, ಮೂಲಸೌಕರ್ಯ ಸೇರಿದಂತೆ ಹಲವು ಪ್ರಮುಖ ಕ್ಷೇತ್ರಗಳಲ್ಲಿ ಭಾರೀ ಹೂಡಿಕೆ ಮಾಡಲಾಗುತ್ತಿದೆ. ಈ ಎಲ್ಲಾ ಸುಧಾರಣೆಗಳಿಂದಾಗಿ ಯುವ ಜನತೆಗೆ ಅಭೂತಪೂರ್ವ ಸಂಖ್ಯೆಯಲ್ಲಿ ಹೊಸ ಉದ್ಯೋಗಾವಕಾಶಗಳು ಸೃಷ್ಟಿಯಾಗುತ್ತಿವೆ ಎಂದು ತಿಳಿಸಿದರು. ಇಂದು ದೇಶದ ೪೭ ಆಯ್ದ ಪ್ರಮುಖ ಸ್ಥಳಗಳಲ್ಲಿ ನಡೆದ ೧೯ನೇ ಆವೃತ್ತಿಯ ಉದ್ಯೋಗ ಮೇಳದಲ್ಲಿ ೫೧ ಸಾವಿರಕ್ಕೂ ಹೆಚ್ಚು ಯುವಕ, ಯುವತಿಯರಿಗೆ ನೇಮಕಾತಿ ಪತ್ರಗಳನ್ನು ವಿತರಿಸಲಾಯಿತು.

**<>><><*><><<>**

ಕಳೆದ ೧೨ ವರ್ಷಗಳಲ್ಲಿ ಸರ್ಕಾರ ನೇಮಕಾತಿ ಪ್ರಕ್ರಿಯೆಗಳಲ್ಲಿ ಪಾರದರ್ಶಕತೆಗೆ ಒತ್ತು ನೀಡಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯುಷ್ ಗೋಯಲ್ ತಿಳಿಸಿದ್ದಾರೆ. ದೆಹಲಿಯಲ್ಲಿಂದು ೧೯ನೇ ರೋಜ್‌ಗಾರ್ ಮೇಳ ಉದ್ದೇಶಿಸಿ ಮಾತನಾಡಿದ ಅವರು, ಭಾರತ ೨೦೪೭ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವತ್ತ ಸಾಗುವ ಪಯಣದಲ್ಲಿ ಸೇವೆಗೆ ಹೊಸದಾಗಿ ಆಯ್ಕೆಯಾಗುವವರು ಮಹತ್ವದ ಕೊಡುಗೆ ನೀಡಲಿದ್ದಾರೆ. ಉದ್ಯೋಗಮೇಳವು ಅಭ್ಯರ್ಥಿಗಳು ತಮ್ಮ ಜೀವನ ಗುರಿಯನ್ನು ಪ್ರತಿಬಿಂಬಿಸಲು ಒಂದು ಅವಕಾಶವಾಗಿದೆ ಎಂದು ಹೇಳಿದರು. ಹೊಸದಾಗಿ ಸೇವೆಗೆ ಸೇರ್ಪಡೆಯಾಗುವವರು, ಸಾರ್ವಜನಿಕರ ಕುಂದು-ಕೊರತೆಗಳನ್ನು ಪರಿಣಾಮಕಾರಿಯಾಗಿ ಪರಿಹರಿಸಲು ತಮ್ಮ ಮನೋಸ್ಥಿತಿಯನ್ನು ಸಮರ್ಪಿಸಿಕೊಳ್ಳಬೇಕು ಎಂದು ತಿಳಿಸಿದರು.

**<>><><*><><<>**

೨೦೪೭ ರ ವೇಳೆಗೆ ವಿಕಸಿತ ಭಾರತದ ದೃಷ್ಟಿಕೋನವನ್ನು ಸಾಕಾರಗೊಳಿಸಲು ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳು ಹಾಗೂ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್ ಹೇಳಿದ್ದಾರೆ.

ಚೆನ್ನೈನ ಐಸಿಎಫ್‌ನಲ್ಲಿ ನಡೆದ ರೋಜ್‌ಗಾರ್ ಮೇಳವನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ದೇಶವು ಮೂಲಸೌಕರ್ಯ, ಡಿಜಿಟಲೀಕರಣ, ಉದ್ಯೋಗಾವಕಾಶಗಳು ಮತ್ತು ಉದ್ಯಮ ಸ್ನೇಹಿ ವಾತಾವರಣ ಸೃಷ್ಟಿಯಲ್ಲಿ ತ್ವರಿತ ಬೆಳವಣಿಗೆ ಕಾಣುತ್ತಿದೆ. ಪ್ರಧಾನಿ ಅವರು ನೀಡಿದ ಭರವಸೆಯಂತೆ ಕೇಂದ್ರ ಸರ್ಕಾರ, ಈವರೆಗೆ ೧೨ ಲಕ್ಷ ಉದ್ಯೋಗಗಳನ್ನು ಒದಗಿಸಿದೆ ಎಂದು ಅವರು ತಿಳಿಸಿದರು. ಸರ್ಕಾರದ ಯಶಸ್ಸು, ಸುಧಾರಣೆ, ಕಾರ್ಯಕ್ಷಮತೆಯಿಂದ ಕೂಡಿರುತ್ತದೆ. ಸರ್ಕಾರದ ವಿವಿಧ ಕಲ್ಯಾಣ ಯೋಜನೆಗಳು ಮತ್ತು ಕಾರ್ಯಕ್ರಮಗಳ ಬಗ್ಗೆ ನಾಗರಿಕರು ತಿಳಿವಳಿಕೆ ಹೊಂದಿರಬೇಕು. ಹೊಸದಾಗಿ ನೇಮಕಗೊಳ್ಳುವವರ ಯಶಸ್ವಿ ವೃತ್ತಿಜೀವನಕ್ಕಾಗಿ ಕರ್ಮಯೋಗಿ ಉಪಕ್ರಮವನ್ನು ಪ್ರಾರಂಭಿಸಲಾಗಿದೆ. ರಾಷ್ಟ್ರ ನಿರ್ಮಾಣದಲ್ಲಿನ ಜವಾಬ್ದಾರಿಗಳನ್ನು ನಿರ್ವಹಿಸುವಲ್ಲಿ ಯಾವುದೇ ರಾಜಿ ಮಾಡಿಕೊಳ್ಳಬಾರದು ಎಂದು ಸಚಿವರು ಕರೆ ನೀಡಿದರು. ಪಿಎಂ-ಕಿಸಾನ್ ಯೋಜನೆಯಡಿ ೧೧ ಕೋಟಿ ರೈತರು ಪ್ರಯೋಜನ ಪಡೆಯುತ್ತಿದ್ದಾರೆ. ಪೆರಂಬೂರಿನಲ್ಲಿ ನಿರ್ಮಿಸಲಾದ ರೈಲು ಬೋಗಿಗಳನ್ನು ವಿದೇಶಗಳಿಗೆ ರಫ್ತು ಮಾಡಲಾಗುತ್ತಿದೆ. ಪಾರದರ್ಶಕತೆ ಮತ್ತು ಗುಣಮಟ್ಟದ ಉತ್ಪಾದನೆಗೆ ಸರ್ಕಾರ ಆದ್ಯತೆ ನೀಡಿದೆ. ಮುಂಬೈ-ಅಹಮದಾಬಾದ್ ಕಾರಿಡಾರ್ ಮತ್ತು ಚೆನ್ನೈ, ಬೆಂಗಳೂರು ಮತ್ತು ಹೈದರಾಬಾದ್ ಅನ್ನು ಸಂಪರ್ಕಿಸುವ ಭವಿಷ್ಯದ ಕಾರಿಡಾರ್‌ಗಳಲ್ಲಿ ಬುಲೆಟ್ ರೈಲು ಸೇವೆಗಳನ್ನು ಪರಿಚಯಿಸಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

<><><*><><<>

ಜಾಗತಿಕ ಪ್ರತಿಕೂಲ ಪರಿಸ್ಥಿತಿಗಳ ನಡುವೆಯೂ ಭಾರತ, ಸದೃಢ ಆರ್ಥಿಕ ಮೂಲಾಧಾರಗಳು ಮತ್ತು ರಫ್ತು ಬೆಳವಣಿಗೆಯನ್ನು ಕಾಣುತ್ತಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಏಪ್ರಿಲ್‌ನಲ್ಲಿ ದಾಖಲಾಗಿರುವ ರಫ್ತು ಬೆಳವಣಿಗೆ, ಅಭಿವೃದ್ಧಿ ವೇಗವು ಮೇ ತಿಂಗಳವರೆಗೂ ಮುಂದುವರೆದಿದ್ದು, ಇದು ಜಾಗತಿಕ ಪ್ರತಿಕೂಲ ಪರಿಸ್ಥಿತಿಗಳ ನಡುವೆಯೂ ಭಾರತೀಯ ಆರ್ಥಿಕತೆಯ ಸ್ಥಿತಿಸ್ಥಾಪಕತ್ವವನ್ನು ಪ್ರತಿಬಿಂಬಿಸುತ್ತದೆ. ಸ್ವಾವಲಂಬನೆ ಮತ್ತು ಜಗತ್ತಿನೊಂದಿಗೆ ಸಮಾನವಾಗಿ ತೊಡಗಿಸಿಕೊಳ್ಳುವತ್ತ ಸಾಗುತ್ತಿರುವ ಭಾರತದ ಪಯಣವು, ಒಂಬತ್ತು

ದೇಶಗಳೊಂದಿಗೆ ಮುಕ್ತ ವ್ಯಾಪಾರ ಒಪ್ಪಂದಗಳು ಮತ್ತು ಪ್ರಧಾನಿಯವರ ಐದು ರಾಷ್ಟ್ರಗಳಿಗೆ ಯಶಸ್ವಿ ಭೇಟಿಯಲ್ಲಿ ಪ್ರತಿಫಲಿಸುತ್ತದೆ ಎಂದು ಸಚಿವರು ಹೇಳಿದ್ದಾರೆ. ಭವ್ಯ ಯೋಜನೆಯ ಮೂಲಕ ಸರ್ಕಾರ, ಮತ್ತೊಂದು ಉದ್ಯಮಸ್ನೇಹಿ ಉಪಕ್ರಮವನ್ನು ಆರಂಭಿಸುತ್ತಿದ್ದು, ಇದರಡಿ ದೇಶಾದ್ಯಂತ ೧೦೦ ಕೈಗಾರಿಕಾ ಪಾರ್ಕ್‌ಗಳನ್ನು ಸ್ಥಾಪಿಸಲಾಗುವುದು ಎಂದರು. ೩೩ ಸಾವಿರದ ೬೦೦ ಕೋಟಿ ರೂಪಾಯಿಗೂ ಅಧಿಕ ಅನುದಾನದ 'ಭಾರತ ಔದ್ಯೋಗಿಕ ವಿಕಾಸ' ಯೋಜನೆಯು, ರಾಜ್ಯ ಸರ್ಕಾರಗಳ ಸಹಯೋಗದೊಂದಿಗೆ ಕೈಗಾರಿಕಾ ಪಾರ್ಕ್‌ಗಳನ್ನು ಸ್ಥಾಪಿಸಲಿದೆ ಎಂದು ಸಚಿವ ಪಿಯುಷ್ ಗೋಯಲ್ ತಿಳಿಸಿದ್ದಾರೆ.

<>><><*><><<>

ಪಶ್ಚಿಮ ಬಂಗಾಳದಲ್ಲಿ ಇದೇ ಜುಲೈನಿಂದ ಆಯುಷ್ಮಾನ್ ಭಾರತ್ ಯೋಜನೆ ಆರಂಭವಾಗಲಿದೆ. ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಅವರೊಂದಿಗೆ ಇಂದು ವರ್ಚುವಲ್ ಸಭೆ ನಡೆಸಿದ ನಂತರ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಕೋಲ್ಕತ್ತಾದಲ್ಲಿ ಈ ವಿಷಯ ಪ್ರಕಟಿಸಿದ್ದಾರೆ, ರಾಜ್ಯ ಆರೋಗ್ಯ ಯೋಜನೆಯಾದ 'ಸ್ವಾಸ್ಥ್ಯ ಸತಿ' ಫಲಾನುಭವಿಗಳನ್ನು ಆಯುಷ್ಮಾನ್ ಭಾರತ್ ಯೋಜನೆಗೆ ಸೇರಿಸಲಾಗುವುದು.  ಆಯುಷ್ಮಾನ್ ಭಾರತ್ ಆರೋಗ್ಯ ಮಂದಿರಕ್ಕೆ ಸಂಬಂಧಿಸಿದ ತಿಳುವಳಿಕೆ ಒಪ್ಪಂದಕ್ಕೆ ಜೂನ್‌ನಲ್ಲಿ ದೆಹಲಿಯಲ್ಲಿ ಸಹಿ ಹಾಕಲಾಗುವುದು. ಪಶ್ಚಿಮ ಬಂಗಾಳದಲ್ಲಿ ಪ್ರಧಾನಮಂತ್ರಿ ಜನೌಷಧಿ ಕೇಂದ್ರಗಳನ್ನು ಈಗಿರುವ ೧೧೭ ರಿಂದ ೪೬೯ ಕ್ಕೆ ಹೆಚ್ಚಿಸುವ ಕುರಿತು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಲಾಗಿದೆ ಎಂದು ಸುವೇಂದು ಅಧಿಕಾರಿ ತಿಳಿಸಿದ್ದಾರೆ.

<>><><*><><<>

ಭಾರತೀಯ  ವಾರ್ತಾ ಸೇವೆಯ ನಿವೃತ್ತ ಅಧಿಕಾರಿ ತ್ರಿಲೋಕಿ ನಾಥ್ ದೆಹಲಿಯಲ್ಲಿಂದು ನಿಧನರಾಗಿದ್ದಾರೆ ಅವರಿಗೆ ೭೯ ವರ್ಷ ವಯಸ್ಸಾಗಿತ್ತು, ಕೆಲ ದಿನಗಳಿಂದ ಅವರು ಅನಾರೋಗ್ಯದಿಂದ ಬಳಲುತ್ತಿದ್ದರು. ಆಕಾಶವಾಣಿಯಲ್ಲಿ ಸುದ್ದಿ ಸಂಪಾದಕರಾಗಿ ಹಲವು ವರ್ಷಗಳ ಕಾಲ ಸೇವೆ ಸಲ್ಲಿಸಿದ್ದ ತ್ರಿಲೋಕಿ ನಾಥ್ ಅವರು, ಇದಕ್ಕೂ ಮೊದಲು, ವಾರ್ತಾ ಮತ್ತು ಪ್ರಸಾರ ಸಚಿವಾಲಯದ ವಿವಿಧ ಮಾಧ್ಯಮ ವಿಭಾಗಗಳಲ್ಲಿ ಕಾರ್ಯ ನಿರ್ವಹಿಸಿದ್ದಾರೆ.

<>><><*><><<>

ಲಕ್ನೋದ ಏಕನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>